# ಬೆಂಗಳೂರು ವಿಶ್ವವಿದ್ಯಾಲಯ

ಸಂಖ್ಯೆ: ಎಸಿಎ-3/ಎ1/ಹೊ.ಕಾ/13/VSIMS/2023-2024

ಜ್ಞಾನಭಾರತಿ
ಬೆಂಗಳೂರು-56
**ದಿನಾಂಕ:14-09-2023**

## <u>ಅಧಿಸೂಚನೆ</u>

**ವಿಷಯ: 2023-24ನೇ** ಶೈಕ್ಷಣಿಕ ಸಾಲಿಗೆ, ಬೆಂಗಳೂರಿನ **ವಿದ್ಯಾ ಶೇಖರ್ ಇನ್ಸಿಟಿಟ್ಯೂಷನ್ ಆಫ್ ಮ್ಯಾನೇಜ್ಮೆಂಟ್ ಸ್ಟಡೀಸ್‌ಗೆ** ಹೊಸ ಸಂಯೋಜನೆ ನೀಡುವ ಬಗ್ಗೆ.

**ಉಲ್ಲೇಖ : 1.** ಸರ್ಕಾರದ ಪತ್ರದ ಸಂಖ್ಯೆ:ಇಡಿ:258:ಯು.ಬಿ.ಪಿ.:2023 ದಿನಾಂಕ:08-09-2023

**2.** ರಿಟ್ ಅರ್ಜಿ ಸಂಖ್ಯೆ: 11433/2023ಗೆ ಮಾನ್ಯ ಉಚ್ಚನ್ಯಾಯಾಲಯದ ಮಧ್ಯಂತರ ತೀರ್ಪು ದಿನಾಂಕ: 26-06-2023.

**3.** ಎ.ಐ.ಸಿ.ಟಿ.ಇ. ಅನುಮೋದನೆ ದಿನಾಂಕ:30-06-2023.

**4.** ಕುಲಪತಿಯವರ ಅನುಮೋದನೆ ದಿನಾಂಕ: 13-09-2023

* * *

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ **2000**ದ **59**ನೇ ಪ್ರಕರಣದ **11**ನೇ ಉಪಪ್ರಕರಣವಡಿ ಪ್ರದತ್ತವಾದ ಅಧಿಕಾರದನ್ವಯ, **ವಿದ್ಯಾ ಶೇಖರ್ ಎಜುಕೇಷನ್ ಟ್ರಸ್ಟ್, ಬೆಂಗಳೂರು** ಇವರು **2023-24**ನೇ ಸಾಲಿನಿಂದ **ಎಸ್.ವೈ. ನಂ.204, ಖಾತಾ ನಂ. 6162, ಇಂದಿರಾನಗರ, ನೆಲಮಂಗಲ, ಎನ್.ಹೆಚ್.-4, ಬೆಂಗಳೂರು-562 123.,** ಇಲ್ಲಿ ಸ್ಥಾಪಿಸಲು ಉದ್ದೇಶಿಸಿರುವ **ವಿದ್ಯಾ ಶೇಖರ್ ಇನ್ಸಿಟಿಟ್ಯೂಷನ್ ಆಫ್ ಮ್ಯಾನೇಜ್ಮೆಂಟ್ ಸ್ಟಡೀಸ್‌ಗೆ,** ಕೆಳಕಂಡ ಕೋರ್ಸುಗಳೊಂದಿಗೆ ಹೊಸದಾಗಿ ಪ್ರಾರಂಭಿಸಲು ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಸಂಯೋಜನೆಯನ್ನು ಮಂಜೂರು ಮಾಡಲಾಗಿದೆ.

| **ಕೋರ್ಸು** | **ವಿಷಯ, ಶಿಸ್ತಿನ/ಮೂಲ ವಿಷಯಗಳು** ( Subject, Discipline / Core subjects) | **ವಿದ್ಯಾರ್ಥಿ ಪ್ರಮಾಣ** |
|---|---|---|
| **ಬಿ.ಬಿ.ಎ.** | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | **60 (ಅರವತ್ತು)** |
| **ಬಿ.ಸಿ.ಎ.** | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | **120 (ನೂರಾ ಇಪ್ಪತ್ತು)** |
| **ಬಿ.ಕಾಂ.** | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | **100 (ನೂರು)** |
| **ಬಿ.ಎಸ್ಸಿ.** | ಗಣಕವಿಜ್ಞಾನ<br>ಗಣಿತಶಾಸ್ತ್ರ | **50(ಐವತ್ತು)**<br>**50(ಐವತ್ತು)** |
| **ಎಂ.ಬಿ.ಎ.** | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | **180(ನೂರ ಎಂಭತ್ತು)** |

ಕಾಲೇಜು ಸ್ಥಳೀಯ ವಿಚಾರಣಾ ಸಮಿತಿಯ ಷರತ್ತುಗಳು ಸೇರಿದಂತೆ ಎಲ್ಲಾ ಷರತ್ತು ಮತ್ತು ನಿಬಂಧನೆಗಳನ್ನು 06 ತಿಂಗಳುಗಳ ಒಳಗಾಗಿ ಪೂರೈಸತಕ್ಕದ್ದು.

**ಷರತ್ತು ಮತ್ತು ನಿಬಂಧನೆಗಳು:**

1. ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ ಪ್ರಕರಣ 59ರಲ್ಲಿನ ಮಾನದಂಡಗಳನ್ನು ಹಾಗೂ ಸಂಯೋಜನೆಗೆ ಸಂಬಂಧಿಸಿದಂತೆ, ಸರ್ಕಾರದಿಂದ ಹೊರಡಿಸಿರುವ ಆದೇಶ ಮತ್ತು ಸುತ್ತೋಲೆಗಳನ್ನು ಕಾಲೇಜು ಕಡ್ಡಾಯವಾಗಿ ಪಾಲಿಸತಕ್ಕದ್ದು. ಸರ್ಕಾರದ ಆದೇಶ ಸಂಖ್ಯೆ ಇಡಿ 29 ಯುಎನ್ಇ 2021 ದಿನಾಂಕ; 12-02-2021ರಲ್ಲಿನ ಷರತ್ತುಗಳನ್ನು ಆರು ತಿಂಗಳ ಒಳಗಾಗಿ ಪೂರೈಸತಕ್ಕದ್ದು.

2. ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಮೇಲ್ಕಂಡ ಕಾಲೇಜಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರುಮಾಡುವುದಿಲ್ಲ; ಅದು ಶಾಶ್ವತ ಅನುದಾನ ರಹಿತ ಕಾಲೇಜೆಂದು ಪರಿಗಣಿಸತಕ್ಕದ್ದು.

3. ಶಾಶ್ವತ ಅನುದಾನ ರಹಿತ ಷರತ್ತಿಗೆ ಒಳಪಡಲು ಕಾಲೇಜು ಸರ್ಕಾರಕ್ಕೆ ಬರೆದುಕೊಟ್ಟಿರುವ ಮಧ್ಯಂತರ ಒಪ್ಪಂದವಲ್ಲಿನ ನಿಬಂಧನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

4. ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;

5. **ಸರ್ಕಾರವು ನಿರ್ದೇಶಿಸಿರುವಂತೆ ಸಂಯೋಜಿತ ಕೋರ್ಸುಗಳಿಗೆ ಕಡ್ಡಾಯವಾಗಿ ಸರ್ಕಾರದ UUCMS ಪೋರ್ಟಲ್ ಮೂಲಕವೇ ಪ್ರವೇಶಾತಿಯನ್ನು ಮಾಡತಕ್ಕದ್ದು.**

6. ಎಂ.ಬಿ.ಎ. ಕೋರ್ಸಿಗೆ ಪ್ರತಿ ಶೈಕ್ಷಣಿಕ ವರ್ಷದ ಎ.ಐ.ಸಿ.ಟಿ.ಇ ಯ ವಿಸ್ತರಣಾ ಅನುಮೋದನೆಯನ್ನು ಕಡ್ಡಾಯವಾಗಿ ಪಡೆದುಕೊಳ್ಳತಕ್ಕದ್ದು.

7. ಎ.ಐ.ಸಿ.ಟಿ.ಇ, ನವದೆಹಲಿ, ಕರ್ನಾಟಕ ಸರ್ಕಾರ, ಹಾಗೂ ಬೆಂಗಳೂರು ವಿಶ್ವವಿದ್ಯಾಲಯದ ವಿಧಿಸಿರುವ /ವಿಧಿಸುವ ಷರತ್ತು ನಿಬಂಧನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

8. ***ಎಂ.ಬಿ.ಎ. ಕೋರ್ಸಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಕರ್ನಾಟಕ ಎಂ.ಬಿ.ಎ. ಮತ್ತು ಎಂ.ಸಿ.ಎ. ಕೋರ್ಸುಗಳ ಅಭ್ಯರ್ಥಿಗಳ ಆಯ್ಕೆ ನಿಯಮಗಳನ್ವಯ ಮಾತ್ರ ಪಡೆಯತಕ್ಕದು.***

9. ಸದರಿ ಕೋರ್ಸುಗಳಿಗೆ ವಿಶ್ವವಿದ್ಯಾಲಯದ ಪೂರ್ವಾನುಮತಿಯಿಲ್ಲದೆ ಶಾಖೆಗಳನ್ನು ಹೆಚ್ಚಿಸಬಾರದು.

10. ಸದರಿ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶ ಕಲ್ಪಿಸುವಾಗ ಸರ್ಕಾರದಿಂದ ಆಗಿಂದಾಗ್ಗೆ ಹೊರಡಿಸುವ ಮೀಸಲಾತಿ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

11. Open electiveಗೆ ಸಂಬಂಧಪಟ್ಟ ಹಾಗೆ, ಪ್ರತಿ ಸಂಯೋಜಿತ ಕಾಲೇಜಿನ, ಒಟ್ಟು ಅನುಮೋದಿತ ಕೋರ್ಸ್-ಕಾಂಬಿನೇಷನ್‌ಗಳಲ್ಲಿನ ಪ್ರತಿ ವಿಷಯದ ವಿದ್ಯಾರ್ಥಿ ಪ್ರಮಾಣ (Intake) ಪ್ರಸ್ತುತ ಅನುಮೋದಿತ ವಿದ್ಯಾರ್ಥಿ ಪ್ರಮಾಣದ 50% ಮೀರದಂತೆ ಕ್ರಮ ವಹಿಸುವುದು.

12. ಸ್ಥಳೀಯ ವಿಚಾರಣಾ ಸಮಿತಿಯು ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಹಾಗೂ ಇವುಗಳನ್ನು ಪಾಲಿಸಿದ ಬಗ್ಗೆ ವರದಿಯನ್ನು ವಿಶ್ವವಿದ್ಯಾಲಯಕ್ಕೆ 15 ದಿನಗಳ ಒಳಗಾಗಿ ಕಳುಹಿಸತಕ್ಕದ್ದು.

13. ವಿಶ್ವವಿದ್ಯಾಲಯವು, ಕಾಲೇಜಿನ ವಿದ್ಯಾರ್ಥಿಗಳು, ಬೋಧಕರು ಹಾಗೂ ಬೋಧಕೇತರ ನೌಕರರ ಬಗ್ಗೆ ಕಾಲಕಾಲಕ್ಕೆ ಹೊರಡಿಸುವ ನಿಯಮಾವಳಿ/ಪರಿನಿಯಮಾವಳಿ ಮತ್ತು ಆದೇಶಗಳನ್ನು ಕಾಲೇಜು ಪಾಲಿಸತಕ್ಕದ್ದು. ಕಾಲೇಜು, ವಿಶ್ವವಿದ್ಯಾಲಯದ ಸಂಯೋಜನಾ ಅಧಿಸೂಚನೆಗನುಗುಣವಾಗಿ ಕೋರ್ಸುಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮೀರದಂತೆ ಹಾಗೂ ವಿಶ್ವವಿದ್ಯಾಲಯವು ಕೋರ್ಸುಗಳಿಗೆ ನಿಗಧಿಪಡಿಸಿರುವ ಅರ್ಹತಾ ನಿಯಮಾವಳಿಗಳನ್ನು ಉಲ್ಲಂಘಿಸದಂತೆ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಸಿಕೊಳ್ಳತ್ತಕ್ಕದ್ದು.

ಕೋರ್ಸುಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮೀರಿ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಸಿಕೊಂಡಲ್ಲಿ ಸಂಯೋಜನೆಯನ್ನು ರದ್ದುಪಡಿಸಲಾಗುವುದು.

14. ಕಾಲೇಜು, ಕೋರ್ಸುಗಳ ಶಿಕ್ಷಣ ಕ್ರಮವನ್ನು, ವಿದ್ಯಾರ್ಥಿಗಳ ಶೈಕ್ಷಣಿಕವಾಗಿ ಅಭಿವೃದ್ಧಿಗೊಳಿಸುವ ಮಟ್ಟಕ್ಕೆ ಉತ್ತಮಪಡಿಸತಕ್ಕದ್ದು. ವಿದ್ಯಾರ್ಥಿಗಳನ್ನು, ಸೇವೆಯಲ್ಲಿರುವ ಭೋಧಕರುಗಳನ್ನು ಪ್ರಾಂಶುಪಾಲರು/ಆಡಳಿತ ಮಂಡಳಿಯವರು ಸಹಾನುಭೂತಿಯಿಂದ ನೋಡಿಕೊಳ್ಳತಕ್ಕದ್ದು.

15. ಕಾಲೇಜು/ಆಡಳಿತ ಮಂಡಳಿ ಶೇ.50ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗಧಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗಧಿಪಡಿಸುವ ಶುಲ್ಕವನ್ನು ಮಾತ್ರ ವಸೂಲುಮಾಡತಕ್ಕದ್ದು. ವಿಶ್ವವಿದ್ಯಾಲಯವು ನಿಗಧಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ.

16. ವೈಶಾಕ V/S ರಾಜಸ್ಥಾನದ ರಾಜ್ಯ ಸರ್ಕಾರದ ಮೊಕದ್ದಮೆಗೆ ಸಂಬಂಧಿಸಿದಂತೆ, ದಿನಾಂಕ:13-8-1997ರ ಸರ್ವೋಚ್ಚ ನ್ಯಾಯಾಲಯದ ತೀರ್ಪಿನಂತೆ, ಕಾಲೇಜು ಅಥವಾ ಕಛೇರಿ, ಕೆಲಸ ನಿರ್ವಹಿಸುವ ಸ್ಥಳಗಳಲ್ಲಿ, ಯಾವುದೇ ವ್ಯಕ್ತಿ/ವಿದ್ಯಾರ್ಥಿ, ಗಲಭೆಯನ್ನು ಉಂಟುಮಾಡುವುದಾಗಲೀ ಅಥವಾ ಯಾವುದೇ ವ್ಯಕ್ತಿಯಿಂದ(ಬೋಧಕ/ ಬೋಧಕೇತರ/ ಆಡಳಿತಮಂಡಳಿ) ಅಥವಾ ವಿದ್ಯಾರ್ಥಿಯಿಂದ ಮಹಿಳೆಯರಿಗೆ/ವಿದ್ಯಾರ್ಥಿನಿಯರಿಗೆ ಯಾವುದೇ ರೀತಿಯ ಕಿರುಕುಳ, ಲೈಂಗಿಕ ಕಿರುಕುಳ ನೀಡುವುದು ಶಿಕ್ಷಾರ್ಹ ಅಪರಾಧವಾಗಿದೆ. ಯಾವುದೇ ವ್ಯಕ್ತಿ/ವಿದ್ಯಾರ್ಥಿ ಈ ರೀತಿಯಾದ ಚುಟುವಟಿಕೆಗಳಲ್ಲಿ ಭಾಗಿಯಾಗಿದ್ದಲ್ಲಿ ಅಂತಹವರನ್ನು ಕೆಲಸದಿಂದ/ ವಿದ್ಯಾರ್ಥಿದೆಸೆಯಿಂದ ವಿಮುಕ್ತಿಗೊಳಿಸಬಹುದಾಗಿದೆ. ಕಾಲೇಜು ಈ ರೀತಿಯ ಅಪರಾದಗಳನ್ನು/ಚಟುವಟಿಕೆಗಳನ್ನು ಮಟ್ಟಹಾಕಲು ಸರ್ವೋಚ್ಚ ನ್ಯಾಯಲಯದ ಆದೇಶದಂತೆ ದೂರು ಸಮಿತಿಯನ್ನು ಸ್ಥಾಪನೆ ಮಾಡತಕ್ಕದ್ದು, ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು.

17. ಕಾಲೇಜು ವಿನಾಕಾರಣ ವಿದ್ಯಾರ್ಥಿಗಳ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು ಆರು ತಿಂಗಳ ಅವಧಿ ಮೀರದಂತೆ ತಮ್ಮಲ್ಲಿಯೇ ಇಟ್ಟುಕೊಳ್ಳತಕ್ಕದ್ದಲ್ಲ, ಪ್ರವೇಶ ಅನುಮೋದನೆಗಾಗಿ ಸಲ್ಲಿಸಿರುವ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು, ಪ್ರವೇಶ ಅನುಮೋದನೆಯಾದ ನಂತರ ವಿದ್ಯಾರ್ಥಿಗಳಿಗೆ ತ್ವರಿತವಾಗಿ ಅವರಿಗೆ ವಿತರಣೆಯನ್ನು ಮಾಡಿ ವಿಶ್ವವಿದ್ಯಾಲಯಕ್ಕೆ ತಿಳಿಸತಕ್ಕದ್ದು.

18. ವಿದ್ಯಾರ್ಥಿಗಳು, ವರ್ಗಾವಣೆ ಪತ್ರವನ್ನು ನೀಡುವ ಬಗ್ಗೆ ಮನವಿ ಸಲ್ಲಿಸಿದಲ್ಲಿ, ಕಾಲೇಜು ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆ ನೀಡದೆ, ವರ್ಗಾವಣೆ ಪತ್ರವನ್ನು ನೀಡತಕ್ಕದ್ದು. ಈ ಬಗ್ಗೆ ಆ ವರ್ಷದ/ಸೆಮಿಸ್ಟರ್‌ನ ಪೂರ್ಣವಾಗದ ಅವಧಿಯ ಭೋದನಾ ಶುಲ್ಕವನ್ನು ಹೊರತುಪಡಿಸಿ, ಯಾವುದೇ ಹೆಚ್ಚುವರಿ ಶುಲ್ಕವನ್ನು ವಸೂಲಿ ಮಾಡಲು ನಿಯಮಾವಳಿ ಪ್ರಕಾರ ಅನುಮತಿ ಇರುವುದಿಲ್ಲ.

19. ಯಾವುದೇ ರೀತಿಯಾದ ಕ್ಯಾಪಿಟೇಷನ್ ಶುಲ್ಕವನ್ನು ಕಾಲೇಜು ವಸೂಲಿ ಮಾಡತಕ್ಕದ್ದಲ್ಲ.

20. ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

21. ***ಆಡಳಿತ ವ್ಯವಹಾರದಲ್ಲಿ ಕನ್ನಡವನ್ನು ಕಡ್ಡಾಯವಾಗಿ ಬಳಸತಕ್ಕದ್ದು.***

22. 2024-25ನೇ ಶೈಕ್ಷಣಿಕ ಸಾಲಿಗೆ ಕೋರ್ಸು/ಗಳ ಸಂಯೋಜನಾ ನವೀಕರಣಕ್ಕಾಗಿ ಅರ್ಜಿಯನ್ನು ತಪ್ಪದೆ ಸಲ್ಲಿಸತಕ್ಕದ್ದು.

23. ಈ ಅಧಿಸೂಚನೆಯೊಂದಿಗೆ ಲಗತ್ತಿಸಿರುವ ಮುಚ್ಚಳಿಕೆ ಪತ್ರದ ಮಾದರಿಯನ್ನು ರೂ.20/-ಗಳ ಛಾಪಾಕಾಗದದಲ್ಲಿ ಬೆರಳಚ್ಚು ಮಾಡಿ, ಕಾಲೇಜಿನ ಅಧ್ಯಕ್ಷರು/ಪ್ರಾಂಶುಪಾಲರಿಂದ ಸಹಿ ಮಾಡಿಸಿ, ವಿಶ್ವವಿದ್ಯಾಲಯಕ್ಕೆ 15 ದಿನಗಳ ಒಳಗಾಗಿ ಸಲ್ಲಿಸತಕ್ಕದ್ದು.

24. ಪ್ರಾಂಶುಪಾಲರು, ಮೌಲ್ಯಮಾಪನ ಕಾರ್ಯಕ್ಕಾಗಿ ಅರ್ಹ ಶಿಕ್ಷಕರ ಪಟ್ಟಿಯನ್ನು ಸಂಬಂಧಿಸಿದ ಪರೀಕ್ಷಾ ಮಂಡಳಿಗಳ ಅಧ್ಯಕ್ಷರುಗಳಿಗೆ ತಪ್ಪದೇ ಸಲ್ಲಿಸತಕ್ಕದ್ದು. ತಪ್ಪಿದ್ದಲ್ಲಿ ಕಾಲೇಜಿನ ಸಂಯೋಜನೆಯನ್ನು ರದ್ದುಪಡಿಸಲಾಗುವುದು.

***ವಿ.ಸೂ.2: ಎಂ.ಬಿ.ಎ. ಕೋರ್ಸಿನ ಸಂಯೋಜನೆಯು ರಿಟ್ ಅರ್ಜಿ ಸಂಖ್ಯೆ: 11433/2023ಗೆ ಮಾನ್ಯ ಉಚ್ಚನ್ಯಾಯಾಲಯದ ಅಂತಿಮ ತೀರ್ಪಿಗೆ ಒಳಪಟ್ಟಿರುತ್ತದೆ.***

ಆದೇಶದ ಮೇರೆಗೆ

**ಕುಲಸಚಿವರು**

ಗೆ,

**1. ಅಧ್ಯಕ್ಷರು/ಕಾರ್ಯದರ್ಶಿ,**
**ವಿದ್ಯಾ ಶೇಖರ್ ಎಜುಕೇಷನ್ ಟ್ರಸ್ಟ್,**
**ನಂ.63/2, ಹೆಗ್ಗನಹಳ್ಳಿ ವಿಲೇಜ್, ಯಶವಂತಪುರ ಹೋಬಳಿ, ಬೆಂಗಳೂರು ಉತ್ತರ ತಾಲ್ಲೂಕು,**
**ಬೆಂಗಳೂರು–560 091.**

**2. ಪ್ರಾಂಶುಪಾಲರು,**
**ವಿದ್ಯಾ ಶೇಖರ್ ಇನ್ಸಿಟಿಟ್ಯೂಷನ್ ಆಫ್ ಮ್ಯಾನೇಜ್ಮೆಂಟ್ ಸ್ಟಡೀಸ್, ಎಸ್.ವೈ. ನಂ.204,**
**ಖಾತಾ ನಂ. 6162, ಇಂದಿರಾನಗರ, ನೆಲಮಂಗಲ,**
**ಎನ್.ಹೆಚ್.–4, ಬೆಂಗಳೂರು–562 123.**

ಪ್ರತಿಗಳು:

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು, ಶಿಕ್ಷಣ ಇಲಾಖೆ(ವಿಶ್ವವಿದ್ಯಾಲಯ), ಬಹುಮಹಡಿಗಳ ಕಟ್ಟಡ, ಡಾ|| ಅಂಬೇಡ್ಕರ್ ವೀಧಿ, ಬೆಂಗಳೂರು-1.
2) ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು–1.
3) ಕುಲಸಚಿವರು (ಮೌಲ್ಯಮಾಪನ), ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು–56
4) ಕಾರ್ಯದರ್ಶಿಯವರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು.
5) ಮುಖ್ಯಸ್ಥರು, ಎಂ.ಬಿ.ಎ. ವಿಭಾಗ, ಬೆಂ.ವಿ.ವಿ, ಬೆಂಗಳೂರು–56–ಮಾಹಿತಿಗಾಗಿ
6) ಉಪಕುಲಸಚಿವರು/ಸಹಾಯಕ ಕುಲಸಚಿವರು/ಅಧೀಕ್ಷಕರು ಶೈಕ್ಷಣಿಕ ವಿಭಾಗ–1, ಬೆಂ. ವಿ. ಬೆಂಗಳೂರು–56
7) ಅಧೀಕ್ಷಕರು, ಕಾನ್ಫಿಡೆನ್ಷಿಯಲ್ ವಿಭಾಗ, ಪರೀಕ್ಷಾ ವಿಭಾಗ, ಬೆಂ.ವಿ.ವಿ., ಬೆಂಗಳೂರು–56
8) ಐ.ಟಿ. ಕೋಆರ್ಡಿನೇಟರ್, ಯು.ಯು.ಸಿ.ಎಂ.ಎಸ್., ಬೆಂ.ವಿ.ವಿ, ಬೆಂಗಳೂರು–56–ಕಾಲೇಜನ್ನು ಯುಯುಸಿಎಂಸ್ ತಂತ್ರಾಂಶದಲ್ಲಿ ಸೇರಿಸುವ ಬಗ್ಗೆ ಸೂಕ್ತ ಕ್ರಮಕ್ಕಾಗಿ.
9) ಸಹಾಯಕ ನಿರ್ದೇಶಕರು, ಅಂಕಿ ಅಂಶಗಳ ವಿಭಾಗ, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು–1